ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 33 ಗ್ರಾಪಂಅ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:24-06-2019.

## ಸುತ್ತೋಲೆ

ವಿಷಯ : ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಗ್ರಾಮಠಾಣ ವ್ಯಾಪ್ತಿಗಳಲ್ಲಿರುವ ವಕ್ಫ್ ಆಸ್ತಿಗಳಿಗೆ ಆಸ್ತಿ ಸಂಖ್ಯೆ ನೀಡದೇ ಇರುವುದರಿಂದ ತೆರಿಗೆ ನಿರ್ಧರಣೆ ಪಟ್ಟಿ ಬದಲಾವಣೆ ಮತ್ತು ವಕ್ಫ್ ಆಸ್ತಿ ಎಂದು ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ ಇ-ಸ್ವತ್ತು ತಂತ್ರಾಶದಲ್ಲಿ ಅಳವಡಿಸಲು ಆಗುತ್ತಿರುವ ತೊಂದರೆಯನ್ನು ನಿವಾರಿಸುವ ಕುರಿತು.

ಉಲ್ಲೇಖ : ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರವರ ಅ.ಸ.ಪ ಸಂಖ್ಯೆ: ಕರವಮಂ/ಸಶಾ/516/2018-19, ದಿನಾಂಕ: 29.03.2019.

*****

ಉಲ್ಲೇಖಿತ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ರವರು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯು ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಗ್ರಾಮಠಾಣ ವ್ಯಾಪ್ತಿಯಲ್ಲಿನ ಆಸ್ತಿಯಲ್ಲಿ ಅನೇಕ ವಕ್ಫ್ ಸಂಸ್ಥೆಗಳು ಕಾಲಾಂತರದಿಂದ ಮಸೀದಿ, ದುರ್ಗಾಃ ಆಶೂರ್‌ಖಾನ್ ಇತ್ಯಾದಿ ಧಾರ್ಮಿಕ ಉದೇಶಗಳಿಗೆ ಉಪಯೋಗಿಸಲಾಗುತ್ತಿರುವುದು ರಾಜ್ಯದಲ್ಲಿ ಕೈಗೊಂಡಿರುವ 2ನೇ ಸರ್ವೆ ಕಾರ್ಯದಲ್ಲಿ ಗುರ್ತಿಸಲಾಗಿದೆ. ಕೇಂದ್ರ ಸರ್ಕಾರದ ವಕ್ಫ್ ಕಾಯ್ದೆ, 1995ರ ಕಲಂ 3 (ಡಿ) (i) ಅನುಸಾರ ಕಾಲಾಂತರದಿಂದ ಧಾರ್ಮಿಕ ಉದ್ದೇಶಕ್ಕೆ ಬಳಸಲಾಗುತ್ತಿರುವ ಆಸ್ತಿಗಳು ವಕ್ಫ್ ಆಸ್ತಿಗಳಾಗುವುದು. ಇಂತಹ ಆಸ್ತಿಗಳಿಗೆ ಪ್ರತ್ಯೇಕವಾದ ಆಸ್ತಿ ಸಂಖ್ಯೆಯನ್ನು ನೀಡದೇ ಇರುವುದರಿಂದ ಜಿಲ್ಲಾಧಿಕಾರಿಗಳು ನಮೂನೆ-2ನ್ನು ರಾಜ್ಯಪತ್ರದಲ್ಲಿ ಪ್ರಕಟಿಸುವ ಪ್ರಸ್ತಾವನೆಯಲ್ಲಿ ಆಸ್ತಿ ಸಂಖ್ಯೆ ನಮೂದಿಸಲು ಸಾಧ್ಯವಾಗದೇ ಇರುವ ಬಗ್ಗೆ ವರದಿಗಳು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ಬಂದಿವೆ ಎಂಬುದಾಗಿ ಪ್ರಸ್ತಾಪಿಸಿರುತ್ತಾರೆ.

ಗ್ರಾಮಠಾಣದಲ್ಲಿರುವ ವಕ್ಫ್ ಆಸ್ತಿಗಳಿಗೆ ಆಸ್ತಿ ಸಂಖ್ಯೆಯನ್ನು ನೀಡಿ ತೆರಿಗೆ ನಿರ್ಧರಣೆ ಪಟ್ಟಿ ಬದಲಾವಣೆಯೊಂದಿಗೆ "ಇ-ಸ್ವತ್ತು" ತಂತ್ರಾಂಶದಲ್ಲಿ ಅಳವಡಿಸುವುದು ಅವಶ್ಯಕವಾಗಿರುತ್ತದೆ. ಇದರ ಜೊತೆಗೆ ಕರ್ನಾಟಕ ರಾಜ್ಯದ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ವಕ್ಫ್ ಆಸ್ತಿಗಳ ಖಾತೆ ಬದಲಾವಣೆ ಕಾರ್ಯದ ಪ್ರಗತಿಯ ಬಗ್ಗೆ ಪರಿಶೀಲಿಸುತ್ತಿದೆ.

ಈ ಸಂಬಂಧ ಆದ್ಯತೆ ಮೇಲೆ ಗ್ರಾಮಠಾಣ ವ್ಯಾಪ್ತಿಯಲ್ಲಿನ ಆಸ್ತಿ ಸಂಖ್ಯೆ ನೀಡದೇ ಇರುವ ವಕ್ಫ್ ಆಸ್ತಿಗಳಿಗೆ ಪ್ರತ್ಯೇಕ ಸಂಖ್ಯೆಯನ್ನು ನೀಡಿ ಬಾಕಿ ಇರುವ ಎಲ್ಲಾ ಖಾತೆ ಬದಲಾವಣೆ ಪ್ರಕರಣಗಳನ್ನು ಇತ್ಯರ್ಥಪಡಿಸಲು ಹಾಗೂ ದಿನಾಂಕ:31-07-2019 ರೊಳಗಾಗಿ ಸರ್ಕಾರಕ್ಕೆ ವರದಿ ನೀಡಲು ಸೂಚಿಸಿದೆ.

(ಎಸ್.ಎಂ ಜುಲ್ಫಿಖಾರ್‌ಉಲ್ಲಾ) (ಪ್ರ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಧಾನ ಸೌಧ, ಬೆಂಗಳೂರು.
2) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
3) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ದಾರುಲ್ ಔಖಾಫ್, ನಂ.6, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು.
4) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ.
6) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.